# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:130 RNI NO.KAR KAN/2003/10452:No./PMG/KA/NK/BM/743/24-26 ಗುರುವಾರ ದಿನಾಂಕ: 18-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


* ಮತದಾನ ಜಾಗೃತಿಗೆ ಜಿಲ್ಲಾ ಸ್ವೀಪ್ ಸಮಿತಿಯಿಂದ ವಿಶೇಷ ಕಾರ್ಯಕ್ರಮ * ಕೊಪ್ಪಳದಲ್ಲಿ ಗಮನ ಸೆಳೆದ ಕ್ಯಾಂಡಲ್ ಲೈಟ್ ಮೆರವಣಿಗೆ

## ಮತದಾನ ಮಾಡಲು ನಿಷ್ಕಾಳಜಿ ತೋರದಿರಿ : ನಲಿನ್ ಅತುಲ್




ಕೊಪ್ಪಳ, ಏಪ್ರಿಲ್ 17: ಮತದಾನ ಮಾಡುವುದು ಪ್ರತಿಯೊಬ್ಬ ಪ್ರಜ್ಞೆಯ ಹಕ್ಕು ಮತ್ತು ಕರ್ತವ್ಯವಾಗಿದ್ದು, ಅರ್ಹ ಮತದಾರರು ಮತದಾನ ಮಾಡಲು ನಿಷ್ಕಾಳಜಿ ತೋರದಿರಿ, ಅರ್ಹ ಪ್ರತಿಯೊಬ್ಬ ಮತದಾರರು ಮತದಾನ ಮಾಡಿ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಹೇಳಿದರು.

ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಕೊಪ್ಪಳ ಜಿಲ್ಲಾ ಸ್ವೀಪ್ ಸಮಿತಿಯಿಂದ ಕೊಪ್ಪಳ ನಗರದಲ್ಲಿ ಮಂಗಳವಾರ ಸಂಜೆ (ಏ.16) ಹಮ್ಮಿಕೊಳ್ಳಲಾಗಿದ್ದ ಕ್ಯಾಂಡಲ್ ಲೈಟ್ ಮೆರವಣಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಪ್ರಸ್ತುತ ಸುಮಾರು 18 ಲಕ್ಷ ಮತದಾರರಿದ್ದಾರೆ. ಕಳೆದ ಬಾರಿ ಸುಮಾರು ಶೇ.70 ರಷ್ಟು ಮತದಾನವಾಗಿತ್ತು. ಈ ಬಾರಿಯ ಮತದಾನ ಪ್ರಮಾಣ ಹೆಚ್ಚು ಆಗಬೇಕೆಂಬ ಗುರಿ ಇಟ್ಟುಕೊಂಡು ಜಿಲ್ಲಾ ಸ್ವೀಪ್ ಸಮಿತಿಯಿಂದ ಜಾಗೃತಿ ಮೂಡಿಸಲಾಗುತ್ತಿದೆ. ನಮ್ಮ ಮತ ನಮ್ಮ ಹಕ್ಕು ಆಗಿದ್ದು ಅದನ್ನು ಕಡ್ಡಾಯವಾಗಿ ಚಲಾಯಿಸಬೇಕು. ಮತದಾನ ಪ್ರಕ್ರಿಯೆಯಿಂದ ಯಾರೂ ಸಹ ದೂರ ಉಳಿಯಬಾರದು. ಜಿಲ್ಲೆಯ ಮತದಾನ ಪ್ರಮಾಣ ಹೆಚ್ಚಳಕ್ಕೆ ಎಲ್ಲರೂ ಶ್ರಮಿಸಬೇಕು ಎಂದರು.

ಪ್ರತಿಜ್ಞಾ ವಿಧಿ ಸ್ವೀಕಾರ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ರತ್ನಂ ಪಾಂಡೆಯ ಅವರು ಮತದಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಕಾರ್ಯಕ್ರಮದಲ್ಲಿ ನೆರೆದಿದ್ದ ಎಲ್ಲರೂ ಪ್ರತಿಜ್ಞಾ ವಿಧಿ ಸ್ವೀಕರಿಸಿದರು. (2 ನೇ ಪುಟಕ್ಕೆ)

## ಬೆಳಗಾವಿಯಲ್ಲಿ ಭವಿಷ್ಯ ನುಡಿದ ರಾಜಾಹುಲಿ



ಬೆಳಗಾವಿ: ಕಾಂಗ್ರೆಸ್ ನವರು ಜಾತಿ ಆಧಾರದ ಮೇಲೆ ಬೇಕಾದರೆ ರಾಜಕಾರಣ ಮಾಡಿಕೊಳ್ಳಲಿ ನಾವು, ಹಿಂದೂ, ಮುಸ್ಲಿಂ ಬೇಧ ಭಾವ ಇಲ್ಲ. ಎಲ್ಲರ ಬೆಂಬಲ ದೊಂದಿಗೆ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಗೆಲುವು ಸಾಧಿಸುತ್ತಾರೆ ಎಂದು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಹೇಳಿದರು. ಬುಧವಾರ ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಸುದ್ದಿ ಗಾರರೊಂದಿಗೆ ಮಾತನಾಡಿದರು. ಬೆಳಗಾವಿಯಲ್ಲಿ ಜಾತಿ ಆಧಾರ ದಮೇಲೆ ಪಾಲಿಟಿಕ್ಸ್ ವಿಚಾರದ ಪ್ರಶ್ನೆಗೆ ಉತ್ತರಿಸಿದ ಅವರು, ಕಾಂಗ್ರೆಸ್ ನವರು ಏನಾದರೂ ಮಾಡಿಕೊಳ್ಳಲಿ, ನಾವು ಹಿಂದೂ, ಮುಸ್ಲಿಂ ಬೇಧ ಭಾವ ಇಲ್ಲ ಎಲ್ಲರ ಬೆಂಬಲದೊಂದಿಗೆ ಗೆಲುತ್ತೇವೆ ಎಂದರು. ಸಂಗಣ್ಣ ಕರಡಿ ಕಾಂಗ್ರೆಸ್ ಸೇರ್ಪಡೆ ವಿಚಾರದ ಪ್ರಶ್ನೆಗೆ ಉತ್ತರಿಸಿದ ಅವರು, ಇವತ್ತು ಹೋಗಿ ಅವರನ್ನು ಭೇಟಿಯಾಗಿ ಮಾತನಾಡಬೇಕು ಅನಕೊಂಡೆ. ಇಂತಹ ಘಟನೆಗಳು ಸ್ವಾಭಾವಿಕ ಎಂದರು. ಜಗದೀಶ್ ಶೆಟ್ಟರ್ ನಾಮಪತ್ರ ಸಲ್ಲಿಕೆಗೆ ಬಂದಿದ್ದೇವೆ. ನಾನು ಬೈರತಿ ಬಸವರಾಜ್, ಲೆಹರ್ ಸಿಂಗ್ ಬಂದಿದ್ದೇವೆ. ಮೆರವಣಿಗೆ ಆರಂಭವಾಗಿದ್ದು ಅವರ ಜೊತೆ ಸೇರಿ ನಾಮಪತ್ರ ಸಲ್ಲಿಸುತ್ತೇನೆ.ಇದಾದ ಬಳಿಕ ಕೊಪ್ಪಳಕ್ಕೆ ಹೋಗಬೇಕು. ವಾತಾವರಣ ಎಲ್ಲಾ ಕಡೆಗಳಲ್ಲಿ ಅನಕೂಲಕರವಾಗಿದೆ. ನಾನು ಈ ಹಿಂದೆ ಹೇಳಿದಂತೆ 28ಕ್ಕೆ 28 ಕ್ಷೇತ್ರ ಗೆಲ್ಲುವ ದೃಷ್ಟಿಯಿಂದ ಕೆಲಸ ಮಾಡುತ್ತಿದ್ದೇವೆ ಎಂದರು.

## ಮನೆಯಿಂದ ಮತದಾನ : ಹಕ್ಕು ಚಲಾಯಿಸಿದ ಶೇ.75.22ರಷ್ಟು ಮಂದಿ

ಬೆಂಗಳೂರು, ಏ.17- ಪ್ರಸಕ್ತ ಲೋಕಸಭಾ ಚುನಾವಣೆಯ ರಾಜ್ಯದ ಮೊದಲ ಹಂತದ ಮತದಾನ ನಡೆಯುವ 14 ಕ್ಷೇತ್ರಗಳಲ್ಲಿ 80 ವರ್ಷಕ್ಕಿಂತ ಮೇಲ್ಪಟ್ಟ ಹಿರಿಯ ಮತದಾರರು ಹಾಗೂ ದಿವ್ಯಾಂಗ ಮತದಾರರು ಶೇ.75.22ರಷ್ಟು ಮತದಾನವನ್ನು ಮನೆಯಿಂದ ಮಾಡಿದ್ದಾರೆ.ಮನೆಯಿಂದ ಮತದಾನ ಮಾಡಲು 48,609 ಮತದಾರರು 12 ಡಿ ನಮೂನೆಯನ್ನು ಸಲ್ಲಿಸಿದ್ದರು. ಅವರಲ್ಲಿ ನಿನ್ನೆಯವರೆಗೆ 36,565 ಮತದಾರರು ಮನೆಯಿಂದ ಮತ ಚಲಾಯಿಸಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.85 ವರ್ಷಕ್ಕಿಂತ ಮೇಲ್ಪಟ್ಟ 27,505 ಮತದಾರರು ಅಂದರೆ ಶೇ.74.97ರಷ್ಟು ಹಿರಿಯ ಮತದಾರರು ಮನೆಯಿಂದ ಮತ ಚಲಾಯಿಸಿದ್ದಾರೆ. 36,689 ಮತದಾರರಿಗೆ ಮನೆಯಿಂದ ಮತದಾನ ಮಾಡಲು ಅನುಮೋದಿಸಲಾಗಿದೆ. ಅದೇ ರೀತಿ ಶೇ. 40ಕ್ಕಿಂತ ಹೆಚ್ಚಿನ ದಿವ್ಯಾಂಗ ಮತದಾರರು ಮನೆಯಿಂದ ಮತ ಚಲಾಯಿಸಿದ್ದಾರೆ .9,060 ಮತದಾರರು ಮತದಾನ ಮಾಡಿದ್ದಾರೆ. ಅಂದರೆ ಶೇ.76.01ರಷ್ಟು ಮತದಾನ ಮಾಡಿದ್ದಾರೆ. 11,920 ದಿವ್ಯಾಂಗ ಮತದಾರರಿಗೆ ಮನೆಯಿಂದ ಮತದಾನ ಮಾಡಲು ಅನುಮೋದನೆ ನೀಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.ಏಪ್ರಿಲ್ 13ರಿಂದ ಮನೆಯಿಂದ ಮತದಾನ ಮಾಡುವ ಪ್ರಕ್ರಿಯೆ ನಡೆಯುತ್ತಿದ್ದು, ನಾಳೆ ಮನೆಯಿಂದ ಮತದಾನ ಮಾಡಲು ಕಡೆಯ ದಿನವಾಗಿದೆ.

## ಗೋವಾ ಹೈಕೋರ್ಟ್ ನೋಟಿಸ್ ನೀಡಿದ ಮನೆಗಳನ್ನು ತೆರವು ಮಾಡಿದೆ ಸಿಎಂ ಪ್ರಮೋದ್ ಸಾವಂತ್

ಬೆಳಗಾವಿ: ಗೋವಾದಲ್ಲಿ ಕನ್ನಡಿಗರ ಮನೆಗಳನ್ನು ಹೈಕೋರ್ಟ್ ಆದೇಶದ ಮೇರಗೆ ತೆರವು ಮಾಡಲಾಗಿದೆ ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಹೇಳಿದ್ದರು.ಬೆಳಗಾವಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಗೋವಾ ಮುಖ್ಯಮಂತ್ರಿ ಪ್ರಮೋದ್ ಅಬ್ ಕೀ ಬಾರ್ ಚಾರ್ ಸೌ ಪಾರ್ ಮಾಡಲು ಬೆಳಗಾವಿ ಲೋಕಸಭಾ ಚುನಾವಣೆಯಿಂದ ಅತೀ ದೊಡ್ಡ ಅಂತರದಲ್ಲಿ ಜಗದೀಶ್ ಶೆಟ್ಟರ್ ಗೆಲ್ಲಿಸಿಕೊಂಡು ಬರಬೇಕು, ಕರ್ನಾಟಕ ದಲ್ಲಿ ಬಿಜೆಪಿ ಜೆಡಿಎಸ್ ಎರಡು ಪಕ್ಷ ಸೇರಿ ಕರ್ನಾಟಕದಲ್ಲಿ 28 -28 ಸೀಟ್ ಗಳನ್ನು ಗೆಲ್ಲಿದೆ ಎಂದು ಹೇಳಿದ್ದರು .ಕೇಂದ್ರದಲ್ಲಿ ಮೂರನೇ ಬಾರಿಗೆ ಪ್ರಧಾನ ನರೇಂದ್ರ ಮೋದಿ ನೇತೃತ್ವದ ಸರಕಾರ ರಚನೆಯಾಗಲಿದೆ. ಕರ್ನಾಟಕದಲ್ಲಿಯೂ ಡಬಲ್ ಎಂಜಿನ್ ಸರಕಾರ 'ವಾಗಲಿದೆ ಎಂದು ಹೊಸ ಬಾಂಬ್ ಸಿಡಿಸಿದ್ದರು . ಗೋವಾ ರಾಜ್ಯದ ಹೈಕೋರ್ಟ್ ಆದೇಶದ ಮೇರಗೆ ಕನ್ನಡಿಗರ ಮನೆಗಳನ್ನು ತೆರವು ಮಾಡಲಾಗಿದೆ, ಸರ್ಕಾರ ದಿಂದ ಕನ್ನಡಿಗರಿಗೆ ಬೇರೆ ಸ್ಥಳದಲ್ಲಿ ಮನೆಗಳನ್ನು ಕಟ್ಟಿಸಿಕೊಡುವ ಕೆಲಸ ವಾಗುತ್ತೇದೆ, ಕರ್ನಾಟಕದ ಮುಖ್ಯಮಂತ್ರಿ ನನ್ನ ಜೊತೆಗೆ ಮಾತನಾಡಿಲ್ಲ ಎಂದು ಹೇಳಿದ್ದರು



## ಲೋಕಸಭಾ ಚುನಾವಣೆ-2024 ಮತಗಟ್ಟೆಗಳನ್ನು ಪರಿಶೀಲಿಸಿದ ಚುನಾವಣಾಧಿಕಾರಿ ರಾಹುಲ ಶಿಂಧೆ



ಬೆಳಗಾವಿ.ಏ.17 : ಲೋಕಸಭಾ ಸಾರ್ವತ್ರಿಕ ಚುನಾವಣೆಗಳಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭಗೊಂಡಿರುತ್ತವೆ.

ಮೇ7 ರಂದು ಮತದಾನ ಜರುಗಲಿದ್ದು ಈ ಹಿನ್ನಲೆಯಲ್ಲಿ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯ ಸೂಕ್ಷ್ಮ, ಅತೀ ಸೂಕ್ಷ್ಮ, ಸಖಿ ಹಾಗೂ ಮಾದರಿ ಮತಗಟ್ಟೆಗಳಿಗೆ ಗುರುವಾರ (ಏ.17) ರಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಜಿ.ಪಂ. ಸಿ.ಇ.ಓ ರಾಹುಲ ಶಿಂಧೆ ಅವರು ಭೇಟಿ ನೀಡಿ ಪರಿಶೀಲಿಸಿದರು. ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಮತಗಟ್ಟೆಗಳ ವ್ಯಾಪ್ತಿಯಲ್ಲಿನ ಮತದಾರರಲ್ಲಿ ಆತ್ಮ ವಿಶ್ವಾಸ ಹೆಚ್ಚಿಸಲು ಪೊಲೀಸ್ ಪಥ ಸಂಚಲನ ಹಾಗೂ ಸ್ವೀಪ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವದರ ಮೂಲಕ ಮತದಾನ ಪ್ರಮಾಣ ಹೆಚ್ಚಿಸಲು ಕ್ರಮಕೈಗೊಳ್ಳುವಂತೆ ಈ ಸಂದರ್ಭದಲ್ಲಿ ಸೂಚಿಸಿದರು.

ಮತದಾನದ ದಿನದಂದು ಮತಗಟ್ಟೆಗೆ ಆಗಮಿಸುವ ಮತದಾರರಿಗೆ ನೆರಳು, ಕುಡಿಯುವ ನೀರು, ಶೌಚಾಲಯ ಸ್ಥಳಗಳನ್ನು ಪರಿಶೀಲಿಸಿ, ಮತಗಟ್ಟೆಗಳಿಗೆ ಆಗಮಿಸುವ ವಿಕಲಚೇತನರಿಗೆ ಗಾಲಿ ಕುರ್ಚಿಗಳ ವ್ಯವಸ್ಥೆಗೆ ಕ್ರಮಕೈಗೊಳ್ಳಬೇಕು.

ಒಟ್ಟಾರೆಯಾಗಿ ಮತದಾನದ ದಿನದಂದು ಮತಗಟ್ಟೆಗಳಿಗೆ ಆಗಮಿಸುವ ಮತದಾರರಿಗೆ ಯಾವುದೇ ರೀತಿಯ ಅನಾನುಕೂಲತೆಗಳು ಆಗದಂತೆ ನಿಗಾವಹಿಸಲು ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಉಪಸ್ಥಿತರಿದ್ದರು.

## ಸಂಸದ ಕರಡಿ ಪಕ್ಷಾಂತರ ಎಫೆಕ್ಟ ಬಿಜೆಪಿ ಸಮಾವೇಶ ಖಾಲಿ!



ಕೊಪ್ಪಳ :ಬಿಜೆಪಿ ಅಭ್ಯರ್ಥಿ ಡಾಕ್ಟರ್ ಬಸವರಾಜ ಕ್ಯಾವಟರ್ ಪರ ಪ್ರಚಾರಕ್ಕೆ ಆಗಮಿಸಿದ ಬಿಎಸ್ ವೈ ಭಾಷಣ ಮಾಡುವುದು ವೇಳೆ ಜನರು ಇಲ್ಲದೆ ಚೇರುಗಳು ಖಾಲಿ ಖಾಲಿ ಕಾಣುತ್ತಿದ್ದವು.

ಬಿಜೆಪಿ ಪಾಳ್ಯದಲ್ಲಿ ಸಂಗಣ್ಣ ಕರಡಿ ಕಾಂಗ್ರೆಸ್ ಸೇರುದರಿಂದ ಬಿಜೆಪಿ ಪಾಳ್ಯದಲ್ಲಿ ಕಾರ್ಯಕರ್ತರಲ್ಲಿ ಭಿನ್ನಮತ ಉಂಟಾಗಿದೆ.

ಸಂಶೋಧ ಸಂಗಣ್ಣ ಕರಡಿಯವರು ಬಿಜೆಪಿ ಪಕ್ಷವನ್ನು ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಧಿಕೃತವಾಗಿ ಸೇರ್ಪಡೆಯಾಗಿದ್ದಾರೆ ಸಂಗಣ್ಣ ಕರಡಿ ಅವರ ಕಟ್ಟ ಅಭಿಮಾನಿಗಳು ಹಾಗೂ ಮುಖಂಡರು ಕೈ ಸೇರುತ್ತಿದ್ದಾರೆ.

ಕೊಪ್ಪಳದಲ್ಲಿ ತನ್ನದೇ ಹಿಡಿತವನ್ನು ಇಟ್ಟುಕೊಂಡಿರುವ ಸಂಗಣ್ಣ ಕರಡಿ ಬೆಂಬಲಿಗರು ಹಾಗೂ ಕಾರ್ಯಕರ್ತರು ಹೋಗದೆ ವೇದಿಕೆ ಮುಂಭಾಗದಲ್ಲಿ ಜನರು ಇಲ್ಲದೆ ಖಾಲಿಯರಿಗೆ ಬಿಎಸ್ ವೈ ಭಾಷಣ ಮಾಡಿದ್ದಾರೆ.

## ದ್ವಿತೀಯ ಪಿಯುಸಿ ಪರೀಕ್ಷೆ-2; ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ಸೂಚನೆ



ಗದಗ ಏಪ್ರಿಲ್ 17;- ದ್ವಿತೀಯ ಪಿಯುಸಿ ಪರೀಕ್ಷೆ- 2 ಅಂತಿಮ ವೇಳಾಪಟ್ಟಿಯು ಈಗಾಗಲೇ ಪ್ರಕಟವಾಗಿದ್ದು, ಇದೇ ಏಪ್ರಿಲ್ 29 ರಿಂದ ಪರೀಕ್ಷೆ ಆರಂಭವಾಗಲಿದೆ. ಆ ನಿಟ್ಟಿನಲ್ಲಿ ಪರೀಕ್ಷೆ ಸಂಬಂಧ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಸೂಚಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ನಿರ್ದೇಶನದಂತೆ ದ್ವಿತೀಯ ಪಿ.ಯು.ಸಿ.-2 ಪರೀಕ್ಷೆಯನ್ನು ನಡೆಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ ಟಿವಿ ಅಳವಡಿಸುವುದು, ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡುವುದು ಸೇರಿದಂತೆ ವ್ಯವಸ್ಥಿತವಾಗಿ ಪರೀಕ್ಷೆ ನಡೆಸಲು ಹಲವು ಕ್ರಮಗಳನ್ನು ಕೈಗೊಳ್ಳುವಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಿಗೆ ಜಿಲ್ಲಾಧಿಕಾರಿ ಅವರು ಸ್ಪಷ್ಟ ನಿರ್ದೇಶನ ನೀಡಿದರು. ಪರೀಕ್ಷೆಯ ಗಂಭೀರತೆಯನ್ನು ತಿಳಿಯಬೇಕು. ಯಾವುದೇ ರೀತಿಯ ಗೊಂದಲಕ್ಕೆ ಅವಕಾಶ ಮಾಡದೇ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಗಾಳಿ, ಬೆಳಕು ವ್ಯವಸ್ಥೆ ಇರಬೇಕು. ಜೊತೆಗೆ ಪರೀಕ್ಷಾ ಸಂದರ್ಭದಲ್ಲಿ ನಿರಂತರ ವಿದ್ಯುತ್ ಸಂಪರ್ಕ ಇರಬೇಕು ಎಂದರು.

ಈ ಬಾರಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆ ರಾಜ್ಯದಲ್ಲಿ ಕೊನೆಯ ಸ್ಥಾನ ಪಡೆದಿರುವುದು ಬೇಸರ ತಂದಿದೆ. ಆದ್ದರಿಂದ ಮುಂದಿನ ವರ್ಷದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ರಾಜ್ಯದಲ್ಲಿ ಉತ್ತಮ ಫಲಿತಾಂಶ ಪಡೆಯಲು ಪ್ರಯತ್ನಿಸಬೇಕು ಎಂದು ಜಿಲ್ಲಾಧಿಕಾರಿ ಅವರು ಸೂಚಿಸಿದರು.ಜಿಲ್ಲೆಯ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಕಡ್ಡಾಯವಾಗಿ ಬಯೋಮೆಟ್ರಿಕ್ ಅಳವಡಿಸಬೇಕು. ಪ್ರಾಂಶುಪಾಲರು, ಉಪನ್ಯಾಸಕರು, ಸಿಬ್ಬಂದಿಗಳುಕಾಲೇಜಿಗೆ ಬರುವ ಮತ್ತು ಹೋಗುವ ಸಮಯ ದಾಖಲಾಗಬೇಕು. ಬಯೋಮೆಟ್ರಿಕ್‌ನಲ್ಲಿ ದೋಷ ಉಂಟಾದಲ್ಲಿ ಆಯಾಯ ಕಾಲೇಜಿನ ಪ್ರಾಂಶುಪಾಲರನ್ನೇ ಹೊಣೆಗಾರರನ್ನಾಗಿ ಮಾಡಬೇಕು ಎಂದು ಜಿಲ್ಲಾಧಿಕಾರಿಯವರು ಇದೇ ಸಂದರ್ಭದಲ್ಲಿ ತಿಳಿಸಿದರು. (2 ನೇ ಪುಟಕ್ಕೆ)

## ಪಂಚಭೂತಗಳಲ್ಲಿ ಹಿರಿಯ ನಟ ದ್ವಾರಕೀಶ್ ಲೀನ



ಬೆಂಗಳೂರು,ಏ.17-ಹೃದಯಾಘಾತದಿಂದ ನಿನ್ನೆ ನಿಧನರಾದ ಕನ್ನಡ ಚಿತ್ರರಂಗದ ಪ್ರಚಂಡ ಕುಳ್ಳ ಎಂದೇ ಖ್ಯಾತಿ ಪಡೆದಿದ್ದ ಹಿರಿಯ ನಟ,ನಿರ್ದೇಶಕ, ನಿರ್ಮಾಪಕ ದ್ವಾರಕೀಶ್ ಅವರ ಪಾರ್ಥೀವ ಶರೀರದ ಅಂತ್ಯಕ್ರಿಯೆ ಇಂದು ಬ್ರಾಹ್ಮಣ ವಿಧಿ ವಿಧಾನದ ಮೂಲಕ ನೆರವೇರಿದ್ದು ಪಂಚಭೂತಗಳಲ್ಲಿ ಲೀನರಾಗಿದ್ದಾರೆ.

ಚಾಮರಾಜಪೇಟೆಯ ಟಿಆರ್ ಮಿಲ್ ಬಳಿಯ ಹಿಂದೂ ರುದ್ರಭೂಮಿಯಲ್ಲಿ ಮಧ್ಯಾಹ್ನ 12 ಗಂಟೆಯ ಸುಮಾರಿಗೆ ಚಿತ್ರರಂಗದ ಗಣ್ಯರು ಕುಟುಂಬದ ಸದಸ್ಯರು ಸೇರಿದಂತೆ ಅಪ್ತರು ದ್ವಾರಕೀಶ್ ಪಾರ್ಥೀವ ಶರೀರಕ್ಕೆ ಸಕಲ ಸರ್ಕಾರಿ ಗೌರವ ಮತ್ತು ಬ್ರಾಹ್ಮಣ ಸಂಪ್ರದಾಯದ ವಿಧಿ ವಿಧಾನದೊಂದಿಗೆ ಪುತ್ರ ಯೋಗೇಶ್ ಸೇರಿದಂತೆ ಪುತ್ರರು ಅಂತ್ಯಕ್ರಿಯೆ ನೆರವೇರಿಸಿದರು. ಈ ಮೂಲಕ ಕನ್ನಡದ ಕುಳ್ಳ ಇನ್ನು ಬರೀ ನೆನಪು ಮಾತ್ರ.ಚಿತೆಗೆ ಅಗ್ನಿ ಸ್ಪರ್ಶ ಮಾಡುವ ಮುನ್ನ ದ್ವಾರಕೀಶ್ ಮಕ್ಕಳು ಅಪ್ಪನ ಹಣೆಗೆ ಕಡೆಯ ಬಾರಿ ಮುತ್ತಿಕ್ಕುವ ಮುನ್ನ ಬೀಳ್ಕೊಟ್ಟರು. ಈ ಕ್ಷಣ ಹೃದಯ ಸ್ಪರ್ಶಿಯಾಗಿತ್ತು. ನೆರದಿದ್ದ ಮಂದಿಯ ಕಣ್ಣೀರ ಧಾರೆ ಹರಿಯಿತು.ಇದಕ್ಕೂ ಮುನ್ನ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯಸ್ಥೆ ಮಾಡಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರು, ರಾಜಕೀಯ ನಾಯಕರು ಅಗಲಿದ ನಾಯಕನಗೆ ಅಂತಿಮ ನಮನ ಸಲ್ಲಿಸಿ ಗುಣಗಾನ ಮಾಡಿದರು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನಟ, ನಿರ್ಮಾಪಕ ನಿರ್ದೇಶಕರಾಗಿ ದ್ವಾರಕೀಶ್ ಸೇವೆ ಸಲ್ಲಿಸಿದವರು, ಅವರ ಸೇವೆ ಮರೆಯಲು ಸಾಧ್ಯವಿಲ್ಲ. ರಾಜ್ ಕುಮಾರ್ ಮತ್ತು ದ್ವಾರಕೀಶ್ ಜೋಡಿ ಯಶಸ್ವಿಯಾಗಿತ್ತು ಜೊತೆಗೆ ಅಂಬರೀಷ್, ವಿಷ್ಣುವರ್ಧನ್ ಜೋಡಿ ಕೂಡ. ಚಿತ್ರಜೀವನದಲ್ಲಿ ಏಳು ಬೀಳು ಕಂಡವರು, ಆದರೂ ಕನ್ನಡ ಚಿತ್ರರಂಗಕ್ಕೆ ಕೊಡುಗೆ ನೀಡಿದವರು ಎಂದು ಗುಣಗಾನ ಮಾಡಿದ್ದಾರೆ.ಹರಿದು ಬಂದ ಜನಸಾಗರ: ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ಜನಸಾಗರ ಹರಿದು ಬಂದಿದ್ದು ಹಿರಿಯ ನಟನ ಕೊಡುಗೆ ಸ್ಮರಿಸಿ ಕಂಬನಿ ಮಿಡಿದರು.ಚಿತ್ರರಂಗದ ಕಲಾವಿದರು, ತಂತ್ರಜ್ಞರು, ನಟ,ನಟಿಯರು ನಿರ್ಮಾಪಕರು, ನಿರ್ದೇಶಕರೂ ಸೇರಿದಂತೆ ವಿವಿಧ ವಿಭಾಗದ ತಂತ್ರಜ್ಞರು ಅಂತಿಮ ದರ್ಶನ ಪಡೆದರು. ದ್ವಾರಕೀಶ್ ಆಪ್ತರು, ಅಭಿಮಾನಗಳು ಮತ್ತು ಚಿತ್ರರಂಗದ ಪ್ರಮುಖರ ಒತ್ತಾಸೆಯಂತೆ ರವೀಂದ್ರ ಕಲಾಕ್ಷೇತ್ರದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು ಗಣ್ಯರು ಮತ್ತು ಅತಿ ಗಣ್ಯರಿಗಾಗಿ ಟೌನ್ ಹಾಲ್ ಕಡೆಯಿಂದ ಪ್ರವೇಶ ಮತ್ತು ಅಭಿಮಾನಗಳು ಮತ್ತು ಜನಸಾಮಾನ್ಯರಿಗಾಗಿ ರವೀಂದ್ರ ಕಲಾಕ್ಷೇತ್ರದ ಕಡೆಯಿಂದ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು.

ಚಿತ್ರರಂಗದ ಪ್ರಮುಖ ನಟ, ನಟಿಯರು ಕಲಾವಿದರಾದ ಸುಮಲತಾ ಅಂಬರೀಷ್, ಶಿವರಾಜ್ ಕುಮಾರ್ ಜಗ್ಗೇಶ್, ರಾಘವೇಂದ್ರ ರಾಜ್‌ಕುಮಾರ್, ಸುದೀಪ್, ಯಶ್, ಧ್ರುವ ಸರ್ಜಾ, ವಾಣಿಜ್ಯ ಮಂಡಳಿ ಅಧ್ಯಕ್ಷ ಎನ್, ಎಂ ಸುರೇಶ್ , ಮಾಜಿ ಅಧ್ಯಕ್ಷ ಭಾಮ ಹರೀಶ್, ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್, ಶೃತಿ, ಸುದಾರಾಣಿ, ದೇವರಾಜ್, ರಬಲನಾಣಿ, ವಿ.ಮನೋಹರ್, ಎಂ.ಎಸ್ ಉಮೇಶ್, ಕುಮಾರ್ ಬಂಗಾರಪ್ಪ, ಡಾ, ನಾಗೇಂದ್ರ ಪ್ರಸಾದ್, ನಿರ್ಮಾಪಕ ಮುನಿರತ್ನ, ಕೆ. ಮಂಜು, ನಟ ಶ್ರೀಮುರಳಿ ,ಅನಿರುದ್, ಚರಣ್ ರಾಜ್, ರಾಕ್ ಲೈನ್ ವೆಂಕಟೇಶ್,ಗಾಯಕಿ ಮಂಜುಳಾ ಗುರುರಾಜ್ ಅನೇಕ ಮಂದಿ ದ್ವಾರಕೀಶ್ ಅವರಿಗೆ ನಮನ ಸಲ್ಲಿಸಿ ಕುಟುಂಬದ ಸದ್ಯರಿಗೆ ಸಾಂತ್ವಾನ ಹೇಳಿದರು.

ಬಿಗಿಭದ್ರತೆ; ಅಗಲಿದ ಹಿರಿಯ ನಟನ ಅಂತಿಮ ದರ್ಶನಕ್ಕೆ ಬಂದ ಚಿತ್ರರಂಗದ ಮಂದಿ ಮತ್ತು ಗಣ್ಯರಿಗಾಗಿ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿತ್ತು. ಜತೆಗೆ ಭದ್ರತೆಗಾಗಿ 200ಕ್ಕೂ ಹೆಚ್ಚು ಪೊಲೀಸರನ್ನು ನಿಯೋಜನೆ ಮಾಡಲಾಗಿತ್ತು.ಪ್ರತಿಯೊಬ್ಬರಿಗೂ ಅಂತಿಮ ದರ್ಶನ ಪಡೆಯಲು ರವೀಂದ್ರ ಕಲಾಕ್ಷೇತ್ರದಲ್ಲಿ ಸಕಲ ವ್ಯವಸ್ಥೆ ಮಾಡಲಾಗಿತ್ತು.